ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 97 (131)
ಸದಸ್ಯರ ಹೆಸರು : ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 13.12.2021
ಉತ್ತರಿಸಬೇಕಾದ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಹೊಸ ಖಾಸಗಿ ಕಿರಿಯ ಪ್ರಾಥಮಿಕ ಶಾಲೆಯನ್ನು ಆರಂಭಿಸಲು ಮಂಜೂರಾತಿ ನೀಡಲು ಸರ್ಕಾರದ ಬಳಿ ಇರುವ ಕಾಯ್ದೆ, ನಿಯಮಗಳು ಮತ್ತು ಕಾನೂನುಗಳೇನು; (ವಿವರ ನೀಡುವುದು)	ಕರ್ನಾಟಕ ಶಿಕ್ಷಣ ಕಾಯ್ದೆ 1983 ರಡಿ ಹೊಸ ಖಾಸಗಿ ಶಾಲೆಗಳಿಗೆ ಅನುಮತಿ ನೀಡುವ ಸಂಬಂಧ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ ಮತ್ತು ನೋಂದಣಿ) ನಿಯಮಗಳು 1995ಕ್ಕೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 709 ಪಿಜಿಸಿ 2017 ದಿನಾಂಕ:08.03.2018ರಲ್ಲಿ ತಿದ್ದುಪಡಿಗಳನ್ನು ತರಲಾಗಿದೆ. ಪ್ರಸ್ತುತ ನಿಯಮಗಳನ್ವಯ ಹೊಸ ಖಾಸಗಿ ಶಾಲೆಗಳನ್ನು ಆರಂಭಿಸಲು ಮಂಜೂರಾತಿ ನೀಡಲಾಗುತ್ತಿದೆ.
ಆ)	2015–16ನೇ ಶೈಕ್ಷಣಿಕ ವರ್ಷದಲ್ಲಿ ರಾಮನಗರ ಜಿಲ್ಲೆಯಲ್ಲಿ ಸರ್ಕಾರದ ನಿಯಮಗಳನ್ನು ಕಾಯ್ದೆಗಳನ್ನು ಬದಿಗೊತ್ತಿ ಕಾನೂನುಬಾಹಿರವಾಗಿ ಸುಮಾರು 13 ಖಾಸಗಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಆರಂಭಿಸಲು ಮಂಜೂರಾತಿ ನೀಡಿ ನೋಂದಣಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು; (ವಿವರ ನೀಡುವುದು)	ಹೌದು, ರಾಮನಗರ ಜಿಲ್ಲೆಯಲ್ಲಿ ಹೊಸ ಖಾಸಗಿ ಶಾಲೆಗಳನ್ನು ಆರಂಭಿಸಲು ನೋಂದಣಿ ಅನುಮತಿ ನೀಡಿರುವ ಉಪನಿರ್ದೇಶಕರು (ಆಡಳಿತ) ರಾಮನಗರ ಜಿಲ್ಲೆ ಇವರ ವಿರುದ್ಧ ಸಲ್ಲಿಕೆಯಾದಂತಹ ದೂರಿನ ಆಧಾರದ ಮೇಲೆ ಇಲಾಖಾ ವಿಚಾರಣೆಯನ್ನು ನಡೆಸಿ ಸದರಿ ವಿಚಾರಣೆಯಲ್ಲಿ ಯಾವುದೇ ಆರೋಪಗಳು ದೃಢಪಟ್ಟಿರುವುದಿಲ್ಲವಾದ್ದರಿಂದ ಸರ್ಕಾರದ ಪತ್ರ ಸಂಖ್ಯೆ:ಇಡಿ 60 ಡಿಜಿಪಿ 2017 ದಿನಾಂಕ:09.08.2021ರಲ್ಲಿ ಆರೋಪವನ್ನು ಮುಕ್ತಾಯಗೊಳಿಸಲು ಆದೇಶಿಸಲಾಗಿರುತ್ತದೆ.
ಇ)	ಸದರಿ ಕಾನೂನುಬಾಹಿರ ನೋಂದಣಿ ಮಾಡಿರುವ ಅಧಿಕಾರಿಯ ವಿರುದ್ಧ ಸರ್ಕಾರದ ಕ್ರಮವೇನು? (ವಿವರ ನೀಡುವುದು)	

ಇಪಿ 398 ಪಿಜಿಸಿ 2021

ಶ್ರೀ ಬಿ.ಸಿ. ನಾಗೇಶ್
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು